ಶೈತಾನನ ಕುತಂತ್ರವನ್ನು ದುರ್ಬೋಧನೆಯಾಗಿ ಮಾರ್ಪಡಿಸಿದ ಅಲ್ಲಾಹನಿಗೆ ಸರ್ವಸ್ತುತಿ

ಇಬ್ನ್ ಅಬ್ಬಾಸ್ (ಅಲ್ಲಾಹು ಅವರಿಬ್ಬರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಅವರು ಹೇಳಿದರು: ಒಬ್ಬ ವ್ಯಕ್ತಿ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು ಹೇಳಿದರು: "ಓ ಅಲ್ಲಾಹನ ಸಂದೇಶವಾಹಕರೇ! ನಮ್ಮಲ್ಲೊಬ್ಬನ ಮನಸ್ಸಿನಲ್ಲಿ ಕೆಲವು ದುರ್ವಿಚಾರಗಳು ಮೂಡುತ್ತವೆ. ಅವುಗಳ ಬಗ್ಗೆ ಮಾತನಾಡುವುದಕ್ಕಿಂತಲೂ ಇದ್ದಿಲುಗಳಾಗಿ ಮಾರ್ಪಡುವುದೇ ಅವನಿಗೆ ಹೆಚ್ಚು ಇಷ್ಟವಾಗಿದೆ." ಆಗ ಅವರು ಹೇಳಿದರು: "ಅಲ್ಲಾಹು ಮಹಾನನು,
ಅಲ್ಲಾಹು ಮಹಾನನು. ಶೈತಾನನ ಕುತಂತ್ರವನ್ನು ದುರ್ಬೋಧನೆಯಾಗಿ ಮಾರ್ಪಡಿಸಿದ ಅಲ್ಲಾಹನಿಗೆ ಸರ್ವಸ್ತುತಿ."
[صحيح] [رواه أبو داود والنسائي في الكبرى]

ಒಬ್ಬ ವ್ಯಕ್ತಿ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು ಹೇಳಿದರು: "ಓ ಅಲ್ಲಾಹನ ಸಂದೇಶವಾಹಕರೇ! ನಮ್ಮಲ್ಲೊಬ್ಬನು ತನ್ನ ಮನಸ್ಸಿನಲ್ಲಿ ಕೆಲವು ದುರ್ವಿಚಾರಗಳು ಬಂದು ಹೋಗುವಂತೆ ಅನುಭವಿಸುತ್ತಾನೆ. ಅವುಗಳ ಬಗ್ಗೆ ಮಾತನಾಡುವುದಕ್ಕಿಂತಲೂ ಬೂದಿಯಾಗಿ ಮಾರ್ಪಡುವುದೇ ಅವನಿಗೆ ಹೆಚ್ಚು ಇಷ್ಟವಾಗಿದೆ." ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಎರಡು ಬಾರಿ ಅಲ್ಲಾಹು ಮಹಾನನು ಎಂದು ಹೇಳಿದರು. ನಂತರ, ಶೈತಾನನ ಕುತಂತ್ರವನ್ನು ಕೇವಲ ದುರ್ಭೋದನೆಯಾಗಿ ಮಾರ್ಪಡಿಸಿದ ಅಲ್ಲಾಹನಿಗೆ ಸ್ತುತಿಯನ್ನು ಅರ್ಪಿಸಿದರು.

http://sunnah.global/hadeeth/kn/show/65012